# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 754
**ಮಾನ್ಯ ಸದಸ್ಯರ ಹೆಸರು** : ಶ್ರೀ ಬಿ.ಎಂ.ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು)
**ಉತ್ತರಿಸಬೇಕಾದ ದಿನಾಂಕ** : 19-09-2022
**ಉತ್ತರಿಸುವ ಸಚಿವರು** : ಪ್ರವಾಸೋದ್ಯಮ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಉಲ್ಲಾಳ ನಗರಸಭೆ ವ್ಯಾಪ್ತಿಯಲ್ಲಿರುವ ಸಮ್ಮರ್ ಸ್ಯಾಂಡ್ ರೆಸಾರ್ಟ್ ಪಕ್ಕದಲ್ಲಿರುವ ಸಮುದ್ರ ದಂಡೆಯು (ಬೀಚ್) ಸುಂದರ ಪ್ರವಾಸಿ ತಾಣವಾಗಿದ್ದು, ಇಲ್ಲಿ ಪ್ರತಿದಿನ ಸಂಜೆ ನೂರಾರು ಜನ ಪ್ರವಾಸಿಗರು / ಸ್ಥಳೀಯರು ಬೀಚ್ ಸೌಂದರ್ಯ ಸವಿಯಲು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಉಳ್ಳಾಲ ನಗರಸಭಾ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕವು ಇಲ್ಲದೇ ಇರುವುದರಿಂದ ನಗರಸಭಾ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ಉಳ್ಳಾಲ ನಗರಸಭಾ ವ್ಯಾಪ್ತಿಯ ಸಮ್ಮರ್ ಸ್ಯಾಂಡ್ ಬಳಿಯ ಸಮುದ್ರ ಕಿನಾರೆ ಬದಿಯ ಸುಮಾರು 100ಮೀ ದೂರದಲ್ಲಿರುವ ಖಾಲಿ ಸ್ಥಳದಲ್ಲಿ ಸಂಗ್ರಹಿಸಿದ ತ್ಯಾಜ್ಯವನ್ನು ಕಾಂಪೆಕ್ಟರ್ ವಾಹನಕ್ಕೆ ತುಂಬಿಸಿ ಮಂಗಳೂರು ಮಹಾನಗರ ಪಾಲಿಕೆಯ ಘನತ್ಯಾಜ್ಯ ಘಟಕ ಪಚ್ಚನಾಡಿಗೆ ಸಾಗಿಸಲಾಗುತ್ತಿದೆ.<br><br>ಸದರಿ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಉಳ್ಳಾಲ ತಾಲೂಕಿನ ನರಿಂಗಾನ ಎಂಬಲ್ಲಿನ ಸರ್ವೆ ನಂಬರ್ 49ರಲ್ಲಿ 60.74ಎಕರೆ ಸ್ಥಳದಲ್ಲಿ ಉಳ್ಳಾಲ ನಗರಸಭಾ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ವಿಲೇ ಮಾಡಲು ಸ್ಥಳ ಕಾಯ್ದಿರಿಸಿದ ಕೂಡಲೇ ನ್ಯೂನ್ಯತೆಗಳನ್ನು ಸರಿಪಡಿಸಲಾಗುವುದೆಂದು ಮತ್ತು ಸಂಜೆ ಸಮಯದಲ್ಲಿ ಬರುವ ಪ್ರವಾಸಿಗಳಿಗೆ ಅನುಕೂಲವಾಗುವಂತೆ ದೀಪಗಳನ್ನು ಹಾಗೂ ಬೆಂಚ್‌ಗಳನ್ನು ಅಳವಡಿಸಿ ಪ್ರವಾಸಿ ತಾಣಗಳ ಅಭಿವೃದ್ಧಿ ಕಾರ್ಯಗಳ ಅನುಷ್ಠಾನಕ್ಕೆ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ರವರ ಮೂಲಕ ಸ್ಥಳೀಯ ಸಂಸ್ಥೆಗಳಿಂದ ಕ್ರಮ ಕೈಗೊಳ್ಳಲಾಗುವುದು. |
| ಆ) | ಹಾಗಿದ್ದಲ್ಲಿ, ಈ ಪ್ರವಾಸಿ ತಾಣದ ಪಕ್ಕದಲ್ಲೇ ನಗರ ಸಭೆಯವರು ಘನತ್ಯಾಜ್ಯವನ್ನು ತಂದು ಸುರಿಯುತ್ತಿರುವುದರಿಂದ, ದುರ್ನಾತ ಉಂಟಾಗಿ ಪ್ರವಾಸಿಗರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಬಂದಿದ್ದಲ್ಲಿ, ಸದರಿ ಪ್ರವಾಸಿ ತಾಣದ ಆವರಣವನ್ನು ಸ್ವಚ್ಛಗೊಳಿಸಿ, ಪ್ರವಾಸಿಗರಿಗೆ ಅನೂಕೂಲವಾಗುವಂತೆ ಸೋಡಿಯಂ ಲ್ಯಾಂಪ್, ಬೆಂಚ್ ಗಳನ್ನು ಅಳವಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | |

**TOR 268 TDV 2022**

**(ಆನಂದ್ ಸಿಂಗ್)**
ಪ್ರವಾಸೋದ್ಯಮ,
ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು